ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2018–19** **ದಿನಾಂಕ: 24–09–2018**

## ಪತ್ರಿಕಾ ಆಮಂತ್ರಣ

1. " ಪೋಷಣ ಅಭಿಯಾನ–ಪೌಷ್ಠಿಕ ಕರ್ನಾಟಕ" ಯೋಜನೆ ಉದ್ಘಾಟನಾ ಸಮಾರಂಭ:

**ಉದ್ಘಾಟನೆ:**

ಹೆಚ್.ಡಿ. ಕುಮಾರಸ್ವಾಮಿ

ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ವಿಶೇಷ ಅತಿಥಿ:**

ಡಾ ಜಿ. ಪರಮೇಶ್ವರ್,

ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಅಧ್ಯಕ್ಷತೆ:**

ಆರ್. ರೋಷನ್ ಬೇಗ್, ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ.

**ಪ್ರಾಸ್ತಾವಿಕ ನುಡಿ:**

ಡಾ. ಜಯಮಾಲ ರಾಮಚಂದ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

ದಿನಾಂಕ:25–09–2018, ಮಂಗಳವಾರ, ಸಮಯ: ಸಂಜೆ 4.30 ಗಂಟೆಗೆ

ಸ್ಥಳ: ನಂ. 419, ವಿಕಾಸಸೌದ, ಬೆಂಗಳೂರು.

ಸಂಖ್ಯೆ:

**<u>ಪತ್ರಿಕಾ ಪ್ರಕಟಣೆ</u>**

## "ಪೋಷಣ ಅಭಿಯಾನ-ಪೌಷ್ಠಿಕ ಕರ್ನಾಟಕ" ಯೋಜನೆಗೆ ಮುಖ್ಯಮಂತ್ರಿಗಳಿಂದ ನಾಳೆ ಚಾಲನೆ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಗರ್ಭಿಣಿ ಸ್ತ್ರೀಯರು ಹಾಗೂ ಮಕ್ಕಳಲ್ಲಿ ಪೌಷ್ಠಿಕಾಂಶವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಹತ್ವಕಾಂಕ್ಷೆ ಯೋಜನೆ ಪೋಷಣ ಅಭಿಯಾನ-ಪೌಷ್ಠಿಕ ಕರ್ನಾಟಕ ಕಾರ್ಯಕ್ರಮಕ್ಕೆ ನಾಳೆ ಮುಖ್ಯಮಂತ್ರಿ ಹೆಚ್. ಡಿ. ಕುಮಾರಸ್ವಾಮಿ ಅವರು ಚಾಲನೆ ನೀಡಲಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಡಾ. ಜಯಮಾಲ ರಾಮಚಂದ್ರ ಅವರು ತಿಳಿಸಿದರು.

ಇಂದು ಖಾಸಗಿ ಹೋಟೆಲ್‌ನಲ್ಲಿ ಯೋಜನೆಯ ಕುರಿತು ಮಾಧ್ಯಮದವರಿಗಾಗಿ ಹಮ್ಮಿಕೊಂಡಿದ್ದ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಈ ಯೋಜನೆಯಡಿಯಲ್ಲಿ ಕರ್ನಾಟಕದ ಆಯ್ದ 19 ಜಿಲ್ಲೆಗಳನ್ನು ಕೇಂದ್ರ ಸರ್ಕಾರ ಆಯ್ದುಕೊಂಡಿದ್ದು ಇದಕ್ಕಾಗಿ ಕೇಂದ್ರ ಸರ್ಕಾರ ಶೇ 60 ಹಾಗೂ ರಾಜ್ಯ ಸರ್ಕಾರ ಶೇ 40 ರಷ್ಟು ಅನುದಾನ ಒದಗಿಸಲಿವೆ.

ಈಗಾಗಲೇ ಈ ಯೋಜನೆಯಡಿಯಲ್ಲಿ ವಿವಿಧ ಕಾರ್ಯಕ್ರಮಗಳು ನಡೆಯುತ್ತಿದ್ದು ಯೋಜನೆಯನ್ನು ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಹಾಗೂ ಸರ್ವರಿಗೂ ದೊರೆಯುವ ಉದ್ದೇಶದಿಂದ ಸರ್ಕಾರದ ವಿವಿಧ ಇಲಾಖೆಗಳಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳನ್ನು ಒಂದೇ ವೇದಿಕೆಯಡಿ ತಂದು ಯೋಜನೆಯ ಸಫಲತೆಗಾಗಿ ಶ್ರಮಿಸಲಾಗುತ್ತಿದೆ.

ರಾಜ್ಯದಲ್ಲಿ ಒಟ್ಟು 66,000 ಅಂಗನವಾಡಿಗಳಿದ್ದು ಅದರಲ್ಲಿ ಆರು ತಿಂಗಳಿಂದ 6 ವರ್ಷದೊಳಗಿನ ಒಟ್ಟು 40 ಲಕ್ಷಕ್ಕೂ ಹೆಚ್ಚಿನ ಮಕ್ಕಳಿದ್ದಾರೆ. ರಾಜ್ಯದಲ್ಲಿ ಕಳೆದ ಆರು ವರ್ಷಗಳಲ್ಲಿ ಹೋಲಿಕೆ ಮಾಡಿದ್ದಲ್ಲಿ ಅಪೌಷ್ಠಿಕತೆ 2012 ರಲ್ಲಿ ಶೇ 1.6 ರಷ್ಟು ಇದ್ದು, ಪ್ರಸ್ತುತ ಸಾಲಿನಲ್ಲಿ ಶೇ 0.39 ರಷ್ಟು ಇಳಿಕೆ ಕಂಡುಬಂದಿದೆ.

ಈ ಯೋಜನೆಯ ಹೊಸ ಕಾರ್ಯಕ್ರಮಗಳಲ್ಲಿ ಗರ್ಭಿಣಿ ಸ್ತ್ರೀಯರಿಗೆ ಸೀಮಂತ, ತಾಯಂದಿರಿಗೆ ಎದೆಹಾಲು ಉಣಿಸುವ ಬಗ್ಗೆ ಅರಿವು, ಮಕ್ಕಳ ವಿವಿಧ ಹಂತದ ಬೆಳವಣಿಗೆಯ ಅರಿವು, ಮಕ್ಕಳಿಗೆ ತಿನಿಸುವ ಆಹಾರದ ಪ್ರಮಾಣ, ಬಳಕೆ ಹಾಗೂ ಪೌಷ್ಠಿಕಾಂಶದ ಆಹಾರಗಳ ಬಗ್ಗೆ ಅರಿವು ಸೇರಿದಂತೆ ಸ್ತ್ರೀಯರಿಗೆ

ಹಾಗೂ ಮಕ್ಕಳಿಗೆ ಉತ್ತಮ ಆರೋಗ್ಯ ನೀಡುವ ಮೂಲಕ ಸ್ವಾಸ್ಥ್ಯ ಸಮಾಜವನ್ನು ಕಟ್ಟುವುದು ಮುಖ್ಯ ಉದ್ದೇಶವಾಗಿದೆ.

ಸರ್ಕಾರ ಯಾವುದೇ ಯೋಜನೆಗಳನ್ನು ಜಾರಿಗೆ ತಂದಾಗ ಅವುಗಳನ್ನು ಜನರಿಗೆ ಮುಟ್ಟಿಸುವುದು, ಅರಿವು ಮೂಡಿಸುವುದು ಹಾಗೂ ಯೋಜನೆಯ ನ್ಯೂನತೆಗಳ ಬಗ್ಗೆ ಸರ್ಕಾರದ ಗಮನಕ್ಕೆ ತರುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮುಖ್ಯವಾದದ್ದು ಎಂದು ಅವರು ಹೇಳಿದರು.

ಪೌಷ್ಠಿಕಾಂಶ ಕುರಿತು ಮಾಧ್ಯಮಗಳಲ್ಲಿ ಪ್ರಕಟವಾಗುವ ಸುದ್ದಿಗಳನ್ನು ತಾವು ಗಂಭೀರವಾಗಿ ಪರಿಗಣಿಸಲಾಗುವುದು ಹಾಗೂ ಅದಕ್ಕೆ ಸಂಬಂಧಪಟ್ಟಂತೆ ಸಮಸ್ಯೆಗೆ ಪರಿಹಾರ ಹುಡಕಲು ಅಧಿಕಾರಿಗಳೊಂದಿಗೆ ಶ್ರಮಿಸುವುದಾಗಿ ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಉಮಾ ಮಹಾದೇವನ್ ಅವರು ಮಾತನಾಡಿ ಯೋಜನೆಯ ಸಮಗ್ರ ಮಾಹಿತಿಯನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಉನ್ನತಾಧಿಕಾರಿಗಳು, ಯುನಿಸೆಫ್ ಸಂಸ್ಥೆಯ ಪ್ರತಿನಿಧಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸಂಖ್ಯೆ:

# ಸೆಪ್ಟೆಂಬರ್ 28 ರಂದು ಔಷಧ ಅಂಗಡಿಗಳ ಮುಷ್ಕರ ಔಷಧಿಗಳ ಬದಲಿ ವ್ಯವಸ್ಥೆಗೆ ಕ್ರಮ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

**ಕರ್ನಾಟಕ ಔಷಧ ವ್ಯಾಪಾರಿಗಳ ಸಂಘ ಬೆಂಗಳೂರು ಮತ್ತು ಸುವರ್ಣ ಕರ್ನಾಟಕ ಕೆಮಿಸ್ಟ್ ಅಂಡ್ ಡ್ರಗ್ಗಿಸ್ಟ್‌ನ ಅಸೋಶಿಯೇಶನ್ ಬೆಂಗಳೂರು ರವರು ಆನ್‌ಲೈನ್ ಮೂಲಕ ಔಷಧ ಮಾರಾಟದ ಬಗ್ಗೆ ದಿನಾಂಕ: 28-08-2018 ರಂದು ಕೇಂದ್ರ ಸರ್ಕಾರವು ಹೊರಡಿಸಿರುವ ಕರಡು ಅಧಿಸೂಚನೆಯನ್ನು ಹಿಂಪಡೆಯುವಂತೆ ಒತ್ತಾಯಿಸಿ ಸೆಪ್ಟೆಂಬರ್ 28 ರಂದು 24 ಗಂಟೆಗಳ ಕಾಲ ಸಮಸ್ತ ರಾಜ್ಯದ ಔಷಧ ವ್ಯಾಪಾರಿಗಳು ಬಂದ್ ಮಾಡುವ ಮೂಲಕ ಮುಷ್ಕರದಲ್ಲಿ ಭಾಗವಹಿಸಲಿದ್ದಾರೆಂದು ತಿಳಿಸಿರುತ್ತಾರೆ.**

ಈ ನಿಟ್ಟಿನಲ್ಲಿ ರಾಜ್ಯದ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿರುವ, ಖಾಸಗಿ ಆಸ್ಪತ್ರೆಗಳಲ್ಲಿ, ನರ್ಸಿಂಗ್ ಹೋಂಗಳಲ್ಲಿ, ಕಾರ್ಪೋರೇಟ್ ಆಸ್ಪತ್ರೆಗಳಿಗೆ ಹೊಂದಿಕೊಂಡಿರುವಂತಹ ಔಷಧ ಅಂಗಡಿಗಳು ಬಂದ್‌ನಿಂದ ವಿನಾಯಿತಿ ಹೊಂದಿದ್ದು, ಸೆಪ್ಟೆಂಬರ್ 28 ರಂದು ಎಂದಿನಂತೆ ತೆರೆದಿರುತ್ತವೆ. ಸಾರ್ವಜನಿಕರು ಔಷಧಿಗಳಿಗಾಗಿ ಸದರಿ ಔಷಧಿ ಅಂಗಡಿಯನ್ನು ಸಂಪರ್ಕಿಸಬಹುದಾಗಿದೆ.

ಔಷಧ ನಿಯಂತ್ರಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲೆಯ ಕಚೇರಿಗಳ ಸಹಾಯಕ ಔಷಧ ನಿಯಂತ್ರಕರುಗಳಿಗೆ ಸಾರ್ವಜನಿಕರಿಗೆ ಔಷಧ ಲಭ್ಯತೆ ಕುರಿತು ಮಾಹಿತಿಯನ್ನು ನೀಡಲು ಸೂಚಿಸಲಾಗಿದೆ. ಎಲ್ಲಾ ಜಿಲ್ಲಾ ಕಚೇರಿಗಳ ಸಹಾಯಕ ಔಷಧ ನಿಯಂತ್ರಕರುಗಳ ದೂರವಾಣಿ ಸಂಖ್ಯೆ ಮತ್ತು ಇತರೆ ವಿವರಗಳು ಇಲಾಖೆಯ ಅಂತರ್ಜಾಲ **http://drugs,kar.nic.in** ನಲ್ಲಿ ಲಭ್ಯವಿರುತ್ತದೆ.

ಸೆಪ್ಟೆಂಬರ್ 28 ರಂದು ಸಾರ್ವಜನಿಕರಿಗೆ ಔಷಧಗಳ ಲಭ್ಯತೆಯ ಬಗ್ಗೆ ಮಾಹಿತಿಯನ್ನು ನೀಡಲು ಔಷಧ ನಿಯಂತ್ರಣ ಇಲಾಖೆಯ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಮಾಹಿತಿಗಾಗಿ ಅವರುಗಳನ್ನು ಸಂಪರ್ಕಿಸಬಹುದಾಗಿದೆ.

**ಶ್ರೀಮತಿ ನಮ್ರತಾ ಹಳ್ಳೂರ, ಸಹಾಯಕ ಔಷಧ ನಿಯಂತ್ರಕರು – 1, ಬೆಂಗಳೂರು ವೃತ್ತ–1, ಮೊಬೈಲ್ ಸಂಖ್ಯೆ 9739658184 ಹಾಗೂ ದೂರವಾಣಿ ಸಂಖ್ಯೆ 080–22341745.**

**ಎಂ. ಸುರೇಶ್, ಸಹಾಯಕ ಔಷಧ ನಿಯಂತ್ರಕರು – 1, ಬೆಂಗಳೂರು ವೃತ್ತ–2, ಮೊಬೈಲ್ ಸಂಖ್ಯೆ 9141166046 ಹಾಗೂ ದೂರವಾಣಿ ಸಂಖ್ಯೆ 080–22341789.**

**ವೆಂಕಟೇಶ್ ಬಿ.ಆರ್. ಸಹಾಯಕ ಔಷಧ ನಿಯಂತ್ರಕರು – 1, ಬೆಂಗಳೂರು ವೃತ್ತ–3, ಮೊಬೈಲ್ ಸಂಖ್ಯೆ 9980938139 ಹಾಗೂ ದೂರವಾಣಿ ಸಂಖ್ಯೆ 080–22341742.**

**ಗೋಣಿ ಫಕೀರಪ್ಪ ಸಹಾಯಕ ಔಷಧ ನಿಯಂತ್ರಕರು – 1, ಬೆಂಗಳೂರು ವೃತ್ತ–4, ಮೊಬೈಲ್ ಸಂಖ್ಯೆ 902759871 ಹಾಗೂ ದೂರವಾಣಿ ಸಂಖ್ಯೆ 080–2341743**

**ಮಲ್ಲಿಕಾರ್ಜುನ ನಾಗೂರ, ಸಹಾಯಕ ಔಷಧ ನಿಯಂತ್ರಕರು – 1, ಬೆಂಗಳೂರು ವೃತ್ತ–5, ಮೊಬೈಲ್ ಸಂಖ್ಯೆ 9449262039 ಹಾಗೂ ದೂರವಾಣಿ ಸಂಖ್ಯೆ 080–22341741.**

.

**ಉಮಾಕಾಂತ್ ಪಾಟೀಲ್, ಸಹಾಯಕ ಔಷಧ ನಿಯಂತ್ರಕರು – 1, ಬೆಂಗಳೂರು ವೃತ್ತ–6, ಮೊಬೈಲ್ ಸಂಖ್ಯೆ 9341264210 ಹಾಗೂ ದೂರವಾಣಿ ಸಂಖ್ಯೆ 080–2341740**

ಜಿ.ವಿ. ನಾರಾಯಣ ರೆಡ್ಡಿ ಸಹಾಯಕ ಔಷಧ ನಿಯಂತ್ರಕರು, ಬೆಂಗಳೂರು ಗ್ರಾಮಾಂತರ ವೃತ್ತ ಮೊಬೈಲ್ ಸಂಖ್ಯೆ 9880139146 ಹಾಗೂ ದೂರವಾಣಿ ಸಂಖ್ಯೆ 080–2341805

ಸಂಖ್ಯೆ:

## ಸಾಲ ಮನ್ನಾ ಯೋಜನೆಯ ಮಾರ್ಗಸೂಚಿಯಲ್ಲಿ ಕೆಲವು ಬದಲಾವಣೆ ಹಾಗೂ ಶೇವಣಿದಾರರಿಗೂ ಸಾಲಮನ್ನಾ ಅನ್ವಯ : ಸಚಿವ ಬಂಡೆಪ್ಪ ಕಾಶೆಂಪೂರ

ಬೆಂಗಳೂರು, ಸೆಪ್ಟೆಂಬರ್ 24 (ಕರ್ನಾಟಕ ವಾರ್ತೆ)

ಸಹಕಾರ ಸಂಸ್ಥೆಗಳಲ್ಲಿ ರೈತರು ಪಡೆದಿರುವ ಸಾಲಮನ್ನಾ ಯೋಜನೆಯ ಮಾರ್ಗಸೂಚಿಯಲ್ಲಿ ಕೆಲ ಅಂಶಗಳನ್ನು ಬದಲಾವಣೆ ಮಾಡಿ ಸರ್ಕಾರ ಇಂದು ರಾಜ್ಯದ ಎಲ್ಲಾ ಸಹಕಾರಿ ಸಂಸ್ಥೆಗಳಿಗೆ ಕಳುಹಿಸಿದೆ ಎಂದು ಸಹಕಾರ ಸಚಿವ ಬಂಡೆಪ್ಪ ಕಾಶೆಂಪೂರ ಅವರು ತಿಳಿಸಿದರು.

ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು ರೈತನ ಸಾಲಮನ್ನಾ ಯೋಜನೆಯನ್ನು ಮುಖ್ಯಮಂತ್ರಿಗಳು ಆಗಸ್ಟ್ ತಿಂಗಳಲ್ಲಿ ಪ್ರಕಟಿಸಿ ಹೊರಡಿಸಿದ್ದ ಮಾರ್ಗಸೂಚಿಯಲ್ಲಿ ಯಾವುದೇ ಶೇವಣಿದಾರರಿಗೆ ಸಾಲಮನ್ನಾ ಅನ್ವಯಿಸುವುದಿಲ್ಲ ಎಂಬ ಅಂಶವನ್ನು ಕೈ ಬಿಡಲಾಗಿದೆ. ನೂತನ ಮಾರ್ಗಸೂಚಿಯನ್ನು ಅಂತಿಮಗೊಳಿಸಿದ್ದು ಇಂದು ಎಲ್ಲಾ ಜಿಲ್ಲಾ ಸಹಕಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗುವುದು ಎಂದು ಸಹಕಾರಿ ಸಚಿವರು ಸ್ಪಷ್ಟಪಡಿಸಿದರು.

ಹಿಂದಿನ ಸರ್ಕಾರ ಪ್ರಕಟಿಸಿದ 50 ಸಾವಿರ ರೂ ಸಾಲ ಮನ್ನಾ ಯೋಜನೆಯ ಪೂರ್ಣ ಹಣವನ್ನು ಸಹಕಾರಿ ಬ್ಯಾಂಕುಗಳಿಗೆ ಪಾವತಿಸಲಾಗಿದೆ ಎಂದು ತಿಳಿಸಿದ ಸಚಿವರು ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ರೈತರು ಪಡೆದಿರುವ ಸಾಲ ಮನ್ನಾದ ಮೊದಲ ಕಂತಿನ 312 ಕೋಟಿ ರೂ. ಹಣವನ್ನು ಅಕ್ಟೋಬರ್ ಎರಡನೇ ವಾರದ ಒಳಗಾಗಿ ಬ್ಯಾಂಕುಗಳಿಗೆ ಸರ್ಕಾರ ಪಾವತಿಮಾಡಲಿದೆ ಎಂದು ಅವರು ತಿಳಿಸಿದರು.

ಸೆಪ್ಟೆಂಬರ್ ತಿಂಗಳಿಂದ ಡಿಸೆಂಬರ್‌ವರೆಗೆ ಹಾಗೂ ಮುಂದಿನ ವರ್ಷದ ಜನವರಿ ತಿಂಗಳಿಂದ ಜೂನ್ ತಿಂಗಳವರೆಗಿನ ಪ್ರತಿ ತಿಂಗಳು ಸಹಕಾರ ಸಂಸ್ಥೆಗಳಿಗೆ ರಾಜ್ಯ ಸರ್ಕಾರ ಪಾವತಿ ಮಾಡಬೇಕಾದ ಹಣದ ವಿವರಗಳನ್ನು ತಿಳಿಸಿದ ಸಚಿವರು, ಸಹಕಾರಿ ಸಂಸ್ಥೆಗಳಲ್ಲಿ ಸಾಲ ಪಡೆದಿರುವ 22 ಲಕ್ಷ ರೈತರಿಗೆ ಅಕ್ಟೋಬರ್ ಮೂರನೇ ವಾರದಲ್ಲಿ ಮುಖ್ಯಮಂತ್ರಿ ಅವರಿಂದ ಋಣಮುಕ್ತ ಪತ್ರವನ್ನು ಕೊಡಿಸಲಾಗುವುದು ಎಂದು ಸಚಿವರು ಹೇಳಿದರು.

ದೇಶದಲ್ಲೇ ಮೊದಲ ಬಾರಿಗೆ ಕಳೆದ ಒಂದೂವರೆ ವರ್ಷದಲ್ಲಿ 17 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ಸಹಕಾರ ಬ್ಯಾಂಕುಗಳಲ್ಲಿ ರೈತರು ಪಡೆದಿರುವ ಸಾಲವನ್ನು ಮನ್ನಾ ಮಾಡಿದ ಮೊದಲ ರಾಜ್ಯ

ನಮ್ಮದಾಗಿದೆ ಎಂದು ತಿಳಿಸಿದ ಸಚಿವರು ನೂತನ ಮಾರ್ಗಸೂಚಿಯಲ್ಲಿ ಜಿಲ್ಲಾ ಸಹಕಾರ ಬ್ಯಾಂಕುಗಳಲ್ಲಿ ಸಾಲ ಮನ್ನಾ ಮಾಡುವ ಅನುದಾನವನ್ನು ನೇರವಾಗಿ ಫಲಾನುಭವಿಗಳಿಗೆ ರೈತ ಉಳಿತಾಯ ಖಾತೆಗೆ ಬಿಡುಗಡೆ ಮಾಡಲಾಗುವುದು ಎಂದು ಅವರು ತಿಳಿಸಿದರು.